62

## ನಗರಾಭಿವೃದ್ಧಿ ಇಲಾಖೆ

## ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಐವನ್ ಡಿ'ಸೋಜಾ, ಇವರು ನಿಯಮ 72 ರಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರ.

---

**ವಿಷಯ :**

ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಅನೇಕ ಕಟ್ಟಡಗಳನ್ನು ಅನಧಿಕೃತವಾಗಿ ನಿರ್ಮಾಣ ಮಾಡಲಾಗಿದ್ದು, ಸದರಿ ಕಟ್ಟಡಗಳಿಗೆ ವಿದ್ಯುತ್ ಮತ್ತು ನೀರು ಮುಂತಾದ ಸೌಲಭ್ಯವನ್ನು ಒದಗಿಸಿ, ಸರ್ಕಾರಕ್ಕೆ ಸೇರಬೇಕಾದ ತೆರಿಗೆಯನ್ನು ವಂಚಿಸುತ್ತಿರುವ ಬಗ್ಗೆ, ಇಲಾಖೆ ಕೈಗೊಂಡಿರುವ ಕ್ರಮಗಳು ಮತ್ತು ಸದರಿ ಕಟ್ಟಡಗಳನ್ನು ಕೆಡವಲು ಇಲಾಖೆಯ ಮುಂದಿರುವ ಕ್ರಮದ ಬಗ್ಗೆ.

**ಉತ್ತರ :**

ಮಂಗಳೂರು ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ನಿಯಮಬಾಹಿರವಾಗಿ ನಿರ್ಮಿಸಿರುವ ಅನಧಿಕೃತ ಕಟ್ಟಡಗಳಿಗೆ ಕರ್ನಾಟಕ ಮಹಾನಗರಪಾಲಿಕೆಗಳ ಅಧಿನಿಯಮ 1976 ಕಲಂ 112(ಸಿ) ಪ್ರಕಾರ ಸ್ವತ್ತು ತೆರಿಗೆಯ ಎರಡರಷ್ಟು ಸಮನಾದ ದಂಡವನ್ನು ವಿಧಿಸಿ ವಸೂಲಿ ಮಾಡಲಾಗುತ್ತಿದೆ. ಕಳೆದ 11 ವರ್ಷಗಳಲ್ಲಿ ಅನಧಿಕೃತವಾಗಿ ನಿರ್ಮಾಣ ಮಾಡಿರುವ ಕಟ್ಟಡಗಳಿಂದ ಒಟ್ಟು ರೂ. 2722.54 ಲಕ್ಷಗಳನ್ನು ದಂಡದ ರೂಪದಲ್ಲಿ ವಸೂಲಿ ಮಾಡಲಾಗಿದೆ.

ನೀರು, ವಿದ್ಯುತ್ ಸೌಲಭ್ಯವು ಸಾರ್ವಜನಿಕ ಮೂಲಭೂತ ಸೌಕರ್ಯವಾಗಿರುವುದರಿಂದ ಅದನ್ನು ಸದರಿ ಕಟ್ಟಡಗಳಿಗೆ ಒದಗಿಸಿದ್ದರೂ ಅದಕ್ಕೆ ನಿಯಮಾನುಸಾರ ನಿಗದಿಪಡಿಸಿದ ಶುಲ್ಕಗಳನ್ನು ಭರಿಸಿಕೊಳ್ಳಲಾಗುತ್ತಿದೆ. ಕಾರಣ, ಮಹಾನಗರಪಾಲಿಕೆಗೆ ಸೇರಬೇಕಾದ ತೆರಿಗೆಯು ವಂಚನೆಯಾಗಿರುವುದಿಲ್ಲ. ಅನಧಿಕೃತ ಕಟ್ಟಡಗಳ ನಿರ್ಮಾಣ ಮಾಡುತ್ತಿರುವುದು ಗಮನಕ್ಕೆ ಬಂದ ತಕ್ಷಣ ಪಾಲಿಕೆಯಿಂದ ಕೂಡಲೇ ಸ್ಥಳ ಪರಿಶೀಲನೆ ಕೈಗೊಂಡು, ಅನಧಿಕೃತ ಕಟ್ಟಡಗಳ ಕಾಮಗಾರಿಯನ್ನು ನಿಲ್ಲಿಸಲು ಹಾಗೂ ನಿರ್ಮಾಣ ಕಾರ್ಯ ಮುಂದುವರಿಸದಂತೆ ಎಚ್ಚರಿಕೆ ನೀಡಲಾಗುತ್ತಿದೆ. ಕಟ್ಟಡ ಪರವಾನಗಿ ಪಡೆದ ಸಂದರ್ಭದಲ್ಲಿ ಮಂಜೂರಾದ ನಕ್ಷೆಗೆ ವಿರುದ್ಧವಾಗಿ ನಿರ್ಮಾಣ ಮಾಡುವುದು ಕಂಡುಬಂದ ಸಂದರ್ಭದಲ್ಲಿ ಹಾಗೂ ನಗರದಲ್ಲಿ ಅನಧಿಕೃತವಾಗಿ ಕಟ್ಟಡ ಕಟ್ಟುತ್ತಿರುವ ಸಂದರ್ಭದಲ್ಲಿ ಸಂಬಂಧಪಟ್ಟ ಮಾಲೀಕರಿಗೆ ಕರ್ನಾಟಕ ಮಹಾನಗರಪಾಲಿಕೆಗಳ ಅಧಿನಿಯಮ 1976 ಕಲಂ 308 ಮತ್ತು 321 ರಂತೆ ನೋಟೀಸು ನೀಡಿ ನಿಯಮಾನುಸಾರ ಕ್ರಮಕೈಗೊಳ್ಳಲಾಗುತ್ತಿದೆ.

ನಅಇ 19 ಎಂಎಂಸಿ 2020ಇ

(ಬಿ.ಎ. ಬಸವರಾಜ)
ನಗರಾಭಿವೃದ್ಧಿ ಸಚಿವರು